ಜಿಲ್ಲಾ ಮುಖ್ಯರಸ್ತೆಗಳು:

| | |
|---|---|
| ೧. ಶಿವಮೊಗ್ಗ ಶಿಕಾರಿಪುರ ಸಿಸಿ ರಸ್ತೆ | ೧೫.೦೦ |
| ೨. ಶಿವಮೊಗ್ಗ ಎನ್.ಆರ್.ಪುರ ರಸ್ತೆ | ೯.೪೦ |
| ಒಟ್ಟು | ೨೪.೪೦ |

*ಕೊರಟಗೆರೆಯಲ್ಲಿ ಕ್ರೀಡಾಂಗಣ ನಿರ್ಮಾಣ.*

2206(2259) ಶ್ರೀ ಚನ್ನಿಗಪ್ಪ ಸಿ. (ಕೊರಟಗೆರೆ) :— ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ತುಮಕೂರು ಜಿಲ್ಲೆ ಕೊರಟಗೆರೆಯಲ್ಲಿ ಕ್ರೀಡಾರ್ಥಿಗಳ ಅನುಕೂಲತೆಯ ಸಲುವಾಗಿ ಒಂದು ಹೊಸ ಕ್ರೀಡಾಂಗಣವನ್ನು ನಿರ್ಮಾಣ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದರೂ ಸಹ ಇದುವರೆಗೂ ಯಾವುದೇ ಕ್ರಮ ಜರುಗಿಸದೆ ಇರಲು ಕಾರಣವೇನು?

ಆ) ಈ ಬೃಹತ್ ಪಟ್ಟಣದಲ್ಲಿ ಕ್ರೀಡಾರ್ಥಿಗಳ ಶ್ರೇಯೋಭಿವೃದ್ಧಿಗೆ ಕ್ರೀಡಾಂಗಣ ನಿರ್ಮಾಣಕ್ಕೆ ಭೂಮಿ ಖರೀದಿಸಿ ಅನುದಾನ ಮಂಜೂರು ಮಾಡಿ ನಿರ್ಮಾಣಕ್ಕೆ ಸೂಕ್ತ ರೀತಿಯ ಕ್ರಮ ಕೈಗೊಳ್ಳುವುದು ಯಾವಾಗ?

ಶ್ರೀ ಎಸ್.ಎಸ್. ಮಲ್ಲಿಕಾರ್ಜುನ್ (ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು) :—

ಅ) ಕ್ರಮ ಜರುಗಿಸಲಾಗುತ್ತಿದೆ.

ಆ) ಕೊರಟಗೆರೆಯಲ್ಲಿ ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕಾಗಿ ಅವಶ್ಯವಿರುವ 5 ಎಕರೆ ಜಮೀನನ್ನು ಪದವಿಪೂರ್ವ ಕಾಲೇಜು ಮೈದಾನದಲ್ಲಿ ಗುರುತಿಸಲಾಗಿದ್ದು, ಈ ನಿವೇಶನವನ್ನು ಇಲಾಖೆಯ ವಶಕ್ಕೆ ಪಡೆಯಲಾಗಿರುತ್ತದೆ. ಕ್ರೀಡಾಂಗಣ ನಿರ್ಮಾಣಕ್ಕಾಗಿ ಅಂದಾಜು ವೆಚ್ಚ ಮತ್ತು ನೀಲಿ ನಕ್ಷೆಯನ್ನು ಸಿದ್ಧಪಡಿಸಲು ಕರ್ನಾಟಕ ಭೂಸೇನಾ ನಿಗಮ ಇವರನ್ನು ಕೋರಿದ್ದು, ಅಲ್ಲಿಂದ ತಾಂತ್ರಿಕ ಒಪ್ಪಿಗೆಯೊಡನೆ ಈ ಅಂದಾಜು ಮತ್ತು ನೀಲಿ ನಕ್ಷೆ ಬಂದ ನಂತರ ಮತ್ತು ಕೊರಟಗೆರೆ ತಾಲ್ಲೂಕು ಕ್ರೀಡಾಂಗಣ ನಿರ್ಮಾಣಕ್ಕೆ ಹಣಕಾಸು ಒದಗಿಸಿಕೊಳ್ಳುವ ಬಗ್ಗೆ ತಾಲ್ಲೂಕು ಕ್ರೀಡಾಂಗಣ ಸಮಿತಿ ಸಭೆಯಲ್ಲಿ ಚರ್ಚಿಸಿ ತೀರ್ಮಾನ ತೆಗೆದುಕೊಂಡ ನಂತರ ಇದಕ್ಕಾಗಿ ಇರುವ ಹಣಕಾಸಿನ ವ್ಯವಸ್ಥೆಯನ್ನು ಗಮನದಲ್ಲಿಟ್ಟುಕೊಂಡು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.